# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ರಾಜ್ಯದಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸ್ಥಾಪಿಸಲಾಗಿದ್ದ ಸಕಾಲ ಸಹಾಯ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಹಾಯಕರಿಗೆ ಗೌರವಧನ ಮಂಜೂರು ಮಾಡುವ ಬಗ್ಗೆ

**ಓದಲಾಗಿದೆ :**

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 122 ನಾಸೇಖಾ 2013, ದಿನಾಂಕ: 11/06/2013.
4. ಜಿಲ್ಲಾಧಿಕಾರಿಗಳು(ಪ್ರ) ಉತ್ತರಕನ್ನಡ ಜಿಲ್ಲೆ ಕಾರವಾರ, ಇವರ ಪತ್ರದ ಸಂಖ್ಯೆ: ಕಂಶಾ/ಎಡಿ ಎಂ/ ಕೆಜಿಎಸ್‌ಸಿ/ವಿವ/18/2012-13 ದಿನಾಂಕ:05/09/2013.

**ಪ್ರಸ್ತಾವನೆ :**

ಮೇಲೆ ಓದಲಾದ (1) ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಟಾನಗೊಳಿಸಲಾಗಿದೆ.

ಮೇಲೆ ಓದಲಾದ(2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ. "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011"ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಸರ್ಕಾರದ 47 ಇಲಾಖೆ/ಸಂಸ್ಥೆಗಳ 478 ಸೇವೆಗಳನ್ನು ಸಕಾಲದಡಿಯಲ್ಲಿ ತರಲಾಗಿದೆ.

ಮೇಲೆ ಓದಲಾದ (3) ರ ಸರ್ಕಾರದ ಆದೇಶದಲ್ಲಿ 177 ತಾಲ್ಲೂಕು ಮತ್ತು 30 ಜಿಲ್ಲಾ ಕೇಂದ್ರಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸಹಾಯ ಕೇಂದ್ರಗಳ ನಿರ್ವಹಣೆಗೆ, ಜುಲೈ 2013ರವರೆಗೆ ಸಕಾಲ ಮಿಷನ್ ನಿಂದ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4)ರ ಪತ್ರದಲ್ಲಿ ಉತ್ತರಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಯವರ 11 ತಹಶೀಲ್ದಾರರ ಕಛೇರಿಯಲ್ಲಿ ಮತ್ತು ಒಂದು ಜಿಲ್ಲಾ ಕೇಂದ್ರದಲ್ಲಿ ಸ್ಥಾಪಿಸಿದ್ದ, ಸಹಾಯ ಕೇಂದ್ರಗಳು ಸ್ಥಗಿತಗೊಂಡಿದ್ದು, ಸಹಾಯ ಕೇಂದ್ರದ ಸಿಬ್ಬಂದಿಗಳು ಆಗಸ್ಟ್ 2013ನೇ ತಿಂಗಳಲ್ಲಿ 22 ದಿನಗಳ ಕಾಲ ಕಾರ್ಯನಿರ್ವಹಿಸಿದ್ದು, ಈ 22 ದಿನಗಳ ಗೌರವಧನವನ್ನು ಮಂಜೂರು ಮಾಡಲು ಮನವಿ ಸಲ್ಲಿಸಿರುತ್ತಾರೆ. ಈ ಕುರಿತು ಪರಿಶೀಲಿಸಲಾಗಿ ಉತ್ತರ ಕನ್ನಡ ಜಿಲ್ಲೆಯ 11 ತಹಶೀಲ್ದಾರರ ಕಛೇರಿ + ಒಂದು ಜಿಲ್ಲಾ ಕೇಂದ್ರದಲ್ಲಿ ಸ್ಥಾಪಿಸಿದ್ದ, ಸಹಾಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದ 12 ಜನ ಸಹಾಯಕರಿಗೆ ಆಗಸ್ಟ್ 2013ನೇ ತಿಂಗಳ 22 ದಿನಗಳ ಗೌರವಧನ, ಪ್ರತಿ ತಿಂಗಳಿಗೆ ಪ್ರತಿ ತಾಲೂಕಿಗೆ ರೂ.10,000/-ಗಳಂತೆ 22 ದಿನಗಳಿಗೆ ರೂ.87,912/- (ಎಂಭತ್ತೇಳು ಸಾವಿರದ ಒಂಭೈನೂರಾ ಹನ್ನೆರಡು ರೂಪಾಯಿಗಳು ಮಾತ್ರ) ಗಳನ್ನು ಬಿಡುಗಡೆ ಮಾಡಲು ಸರ್ಕಾರದಲ್ಲಿ ತೀರ್ಮಾನಿಸಿದೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 122 ನಾಸೇಖಾ 2013,**
**ಬೆಂಗಳೂರು, ದಿನಾಂಕ: 3ನೇ ಮಾರ್ಚ್ 2014.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಉತ್ತರ ಕನ್ನಡ ಜಿಲ್ಲೆಯ 11 ತಹಶೀಲ್ದಾರರ ಕಛೇರಿ + ಒಂದು ಜಿಲ್ಲಾ ಕೇಂದ್ರದಲ್ಲಿ ಸ್ಥಾಪಿಸಿದ್ದ, ಸಹಾಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದ 12 ಜನ ಸಹಾಯಕರಿಗೆ ಆಗಸ್ಟ್ 2013ನೇ ತಿಂಗಳ 22 ದಿನಗಳ ಗೌರವಧನ, ಪ್ರತಿ ತಿಂಗಳಿಗೆ ಪ್ರತಿ ತಾಲೂಕಿಗೆ

ರೂ.10,000/-ಗಳಂತೆ, 22 ದಿನಗಳಿಗೆ, 11 ತಾಲೂಕು + 1 ಜಿಲ್ಲಾ ಕೇಂದ್ರಕ್ಕೆ ರೂ.87,912/- (ಎಂಭತ್ತೇಳು ಸಾವಿರದ ಒಂಭೈನೂರಾ ಹನ್ನೆರಡು ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಜಿಲ್ಲಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ, ಇವರ ಕಛೇರಿಗೆ ಬಿಡುಗಡೆ ಮಾಡಿ ಮಂಜೂರಾತಿ ನೀಡಲಾಗಿದೆ.

ಸದರಿ ಆದೇಶವನ್ನು 2013-14 ನೇ ಸಾಲಿನ ಲೆಕ್ಕ ಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು ಮತ್ತು ಸಂಬಂಧಿಸಿದ ಇಲಾಖೆಯ ಅಧಿಕಾರಿಗೆ ಹಣ ಸೆಳೆಯುವ ಅಧಿಕಾರ ನೀಡಲಾಗಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ:27/04/2012 ಹಾಗೂ ಎಫ್.ಡಿ 01 ಟಿಎಫ್‌ಪಿ 2013, ದಿನಾಂಕ: 20.04.2013ರ ಸರ್ಕಾರದ ಆದೇಶಗಳಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಎನ್. ವರಪ್ರಸಾದ್ ರೆಡ್ಡಿ)
ಆಡಳಿತಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ನಾಗರೀಕ ಸೇವೆಗಳು)

<u>ಇವರಿಗೆ :</u>

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಉತ್ತರಕನ್ನಡ ಜಿಲ್ಲೆ, ಕಾರವಾರ/ ಜಿಲ್ಲಾ ಖಜಾನಾಧಿಕಾರಿಗಳು, ಉತ್ತರಕನ್ನಡ ಜಿಲ್ಲೆ
6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
9. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ (ಆಸು), ಬಹುಮಹಡಿ ಕಟ್ಟಡ, ಬೆಂಗಳೂರು.
10. ಆಡಳಿತಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರ ಅಧೀನ ಕಾರ್ಯದರ್ಶಿಗಳು, ಸಕಾಲ ಮಂಡಳಿ, ಸಿಆಸುಇ (ಆಸು), ಬೆಂಗಳೂರು.
11. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
12. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ರ ಅನುಷ್ಠಾನಕ್ಕೆ ಸ್ಥಾಪಿಸಲಾಗಿದ್ದ ಸಕಾಲ ಸಹಾಯ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಹಾಯಕರಿಗೆ ಗೌರವಧನ ಮಂಜೂರು ಮಾಡುವ ಬಗ್ಗೆ.

ಸಿಆಸುಇ 122 ನಾಸೇಖಾ 2013, ದಿನಾಂಕ: 3/3/2014

| ಕ್ರಮ ಸಂ. | ಇಲಾಖೆ | ಡಿ.ಡಿ.ಓ. ಕೋಡ್ | ಮೊತ್ತ |
|---|---|---|---|
| 1. | ಜಿಲ್ಲಾಧಿಕಾರಿ, ಉತ್ತರಕನ್ನಡ ಜಿಲ್ಲೆ, ಕಾರವಾರ | **3000RD0150** | **87,912/-ಗಳು** |
| (ಎಂಬತ್ತೇಳು ಸಾವಿರದ ಒಂಬೈನೂರ ಹನ್ನೆರಡು ರೂಪಾಯಿಗಳು ಮಾತ್ರ) | | | |